# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 1064 |
| ಸದಸ್ಯರ ಹೆಸರು | : ಶ್ರೀ ಐವನ್ ಡಿ'ಸೋಜಾ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : 18-12-2024. |
| ಉತ್ತರಿಸುವ ಸಚಿವರು | : ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹಜ್ ಭವನ ನಿರ್ಮಾಣ ಮಾಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು; ಇದು ಯಾವ ಹಂತದಲ್ಲಿದೆ; (ವಿವರ ನೀಡುವುದು) | ಮಂಗಳೂರು ತಾಲ್ಲೂಕು, ಕೆಂಜಾರು ಗ್ರಾಮದ ಸ.ನಂ. 99-2 ಎಪಿ 1 ರಲ್ಲಿ 1.92 ಎಕರೆ ಜಮೀನನ್ನು ಈಗಾಗಲೇ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಹೆಸರಿನಲ್ಲಿ ಸ್ವಾಧೀನಪಡಿಸಿಕೊಂಡು, ಹಜ್ ಭವನದ ನಿರ್ಮಾಣಕ್ಕಾಗಿ ಕಾಯ್ದಿರಿಸಲಾಗಿದೆ. ಸದರಿ ಜಮೀನಿಗೆ ಜಿಲ್ಲಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ ಇವರ ನ್ಯಾಯಾಲಯದಲ್ಲಿ ತಕರಾರು ಅರ್ಜಿ ದಾಖಲಾಗಿದ್ದು, ಅರ್ಜಿಯು ಇತ್ಯರ್ಥವಾಗಿರುತ್ತದೆ.<br><br>ದಕ್ಷಿಣ ಕನ್ನಡ ಜಿಲ್ಲೆಯ ಸಂಬಂಧಪಟ್ಟ ಜಿಲ್ಲಾಡಳಿತ ಅಧಿಕಾರಿಗಳಿಗೆ ಸದರಿ ಜಮೀನನ್ನು ಕರ್ನಾಟಕ ರಾಜ್ಯ ಹಜ್ ಸಮಿತಿಗೆ ಹಸ್ತಾಂತರಿಸುವಂತೆ ಈಗಾಗಲೇ ಕೋರಲಾಗಿದ್ದು, ಜಮೀನನ್ನು ಹಜ್ ಸಮಿತಿಗೆ ಹಸ್ತಾಂತರಿಸಿದ ನಂತರ ಹಜ್ ಭವನವನ್ನು ನಿರ್ಮಾಣ ಮಾಡಲು ಕ್ರಮವಹಿಸಲಾಗುವುದು. |
| ಆ) | ಹಜ್ ಭವನಕ್ಕೆ ಮಂಜೂರು ಮಾಡಲಾದ ಭೂಮಿ ಎಷ್ಟು; ಯಾವ ಹಂತದಲ್ಲಿದೆ; (ವಿವರ ನೀಡುವುದು) | |
| ಇ) | ದಕ್ಷಿಣ ಕನ್ನಡ ಜಿಲ್ಲೆಯಿಂದ ಸರ್ಕಾರದ ವತಿಯಿಂದ ಕಳುಹಿಸಲಾಗಿರುವ ಹಜ್ ಯಾತ್ರಿಕರ ಸಂಖ್ಯೆ ಎಷ್ಟು; ಕಳೆದ 03 ವರ್ಷಗಳಿಂದ ಎಷ್ಟು ಹಜ್ ಯಾತ್ರಿಕರಿಗೆ ಸರ್ಕಾರದಿಂದ ಅನುದಾನ ನೀಡಿ ಕಳುಹಿಸಲಾಗಿದೆ? (ವಿವರ ನೀಡುವುದು) | ಕರ್ನಾಟಕ ರಾಜ್ಯ ಹಜ್ ಸಮಿತಿಯ ವತಿಯಿಂದ 2024ನೇ ಹಜ್ ಯಾತ್ರೆಗಾಗಿ ದಕ್ಷಿಣ ಕನ್ನಡ ಜಿಲ್ಲೆಯಿಂದ 1062 ಯಾತ್ರಾರ್ಥಿಗಳನ್ನು ಕಳುಹಿಸಲಾಗಿದೆ.<br><br>ಕರ್ನಾಟಕ ರಾಜ್ಯ ಹಜ್ ಸಮಿತಿಯ ವತಿಯಿಂದ ಪ್ರತಿ ವರ್ಷ ಯಾತ್ರಾರ್ಥಿಗಳು ತಮ್ಮ ಸ್ವಂತ ಖರ್ಚಿನಿಂದ ಹಜ್ ಯಾತ್ರೆಗೆ ಪ್ರಯಾಣ ಮಾಡುತ್ತಾರೆ. ಆದುದರಿಂದ, ಹಜ್ ಯಾತ್ರೆಗೆ ಪ್ರಯಾಣಿಸುವ ಯಾತ್ರಾರ್ಥಿಗಳಿಗೆ ಕರ್ನಾಟಕ ರಾಜ್ಯ ಹಜ್ ಸಮಿತಿ / ರಾಜ್ಯ ಮತ್ತು ಕೇಂದ್ರ ಸರ್ಕಾರದ ವತಿಯಿಂದ ಆರ್ಥಿಕವಾಗಿ ಯಾವುದೇ ರೀತಿಯ ಅನುದಾನ / ಸಹಾಯಧನ ನೀಡಲಾಗುವುದಿಲ್ಲ. |

ಸಂಖ್ಯೆ:MWD 268 LMQ 2024

**(ರಹೀಂ ಖಾನ್ )**
ಪೌರಾಡಳಿತ ಮತ್ತು ಹಜ್ ಸಚಿವರು.